ಕರ್ನಾಟಕಸರ್ಕಾರ

# ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ಶೈವಿ/**10**/ಸುತ್ತೋಲೆ/20-21

ಆಯುಕ್ತರ ಕಛೇರಿ
ಉನ್ನತ ಶಿಕ್ಷಣ ಸೌಧ, ಶೇಷಾದ್ರಿರಸ್ತೆ,
ಬೆಂಗಳೂರು-560001
ದಿನಾಂಕ: 27-04-2021

## ಪರಿಷ್ಕೃತ ಸುತ್ತೋಲೆ

ವಿಷಯ: 2020-21ನೇ ಸಾಲಿನಿಂದ ಇಲಾಖಾ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಆನ್ ಲೈನ್ ತರಗತಿಗಳನ್ನು ನಡೆಸುವ ಕುರಿತು.

******

ಕೋವಿಡ್-19 ಸಾಂಕ್ರಾಮಿಕ ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ರೋಗದ ಹರಡುವಿಕೆಯನ್ನು ತಡೆಗಟ್ಟಲು ಸರ್ಕಾರದ ಆದೇಶದಂತೆ ದಿನಾಂಕ: 28-04-2021 ರಿಂದ 12-05-2021ರವರೆಗೆ ನಿರ್ಬಂಧಗಳನ್ನು ವಿಧಿಸಿದ್ದು, ಈ ಸಂಬಂಧ ವಿಶ್ವವಿದ್ಯಾಲಯಗಳ ಶೈಕ್ಷಣಿಕ ವೇಳಾಪಟ್ಟಿಯಂತೆ ರಾಜ್ಯದ ಎಲ್ಲ ಸರ್ಕಾರಿ/ಖಾಸಗಿ ಅನುದಾನಿತ ಎಲ್ಲಾ ಪದವಿ/ಸ್ನಾತಕೋತ್ತರ/ ಬಿ.ಎಡ್/ ಕಾನೂನು/ಸಂಸ್ಕೃತ/ ಚಿತ್ರಕಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧ್ಯಾಪಕರುಗಳು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪಾಠಪ್ರವಚನಗಳನ್ನು ಆನ್ ಲೈನ್ ಮುಖಾಂತರ ಮನೆಯಿಂದಲೇ (Work from home) ನಿರ್ವಹಿಸಲು ತಿಳಿಸಲಾಗಿದೆ. ಮುಂದುವರೆದು, ಅವಶ್ಯಕತೆಗೆ ಅನುಗುಣವಾಗಿ ಕಾಲೇಜುಗಳ ಪ್ರಾಂಶುಪಾಲರ ಆದೇಶಕ್ಕನುಗುಣವಾಗಿ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳು ಕಾಲೇಜಿಗೆ ಬಂದು ಕರ್ತವ್ಯ ನಿರ್ವಹಿಸುವಂತೆ ಸೂಚಿಸಲಾಗಿದೆ.

**ಆಯುಕ್ತರು**
ಕಾಲೇಜುಮತ್ತುತಾಂತ್ರಿಕಶಿಕ್ಷಣ

**ಇವರಿಗೆ:**
ರಾಜ್ಯದ ಎಲ್ಲ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

**ಪ್ರತಿಯನ್ನು:**

**1.** ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ –ಅಗತ್ಯ ಕ್ರಮಕ್ಕಾಗಿ.
**2.** ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು – ವೆಬ್ ಸೈಟಿನಲ್ಲಿ ಪ್ರಕಟಿಸಲು.
**3.** ಮಾನ್ಯ ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯಆಡಳಿತಾಧಿಕಾರಿಗಳ ಮತ್ತು ಜಂಟಿನಿರ್ದೇಶಕರ ಆಪ್ತಶಾಖೆ – ಮಾಹಿತಿಗಾಗಿ.
**4.**ಕಛೇರಿಪ್ರತಿ.